ಜೆಎಸ್‌ಎಸ್ ಮಹಾವಿದ್ಯಾಪೀಠ
**ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು**
(ಸ್ವಾಯತ್ತ)
ಬಿ.ಎನ್. ರಸ್ತೆ, ಮೈಸೂರು – 570 025
ಪ್ರಚ್ಛನ್ನ ಉತ್ಕೃಷ್ಟತಾ ಕಾಲೇಜು ಎಂದು ಯುಜಿಸಿಯಿಂದ ಗುರುತಿಸಲ್ಪಟ್ಟಿದೆ
(ಮೈಸೂರು ವಿಶ್ವವಿದ್ಯಾನಿಲಯದಿಂದ ಸ್ವಾಯತ್ತತೆ ಪಡೆದಿದೆ * ನ್ಯಾಕ್‌ನಿಂದ 'ಎ' ದರ್ಜೆ ಮಾನ್ಯತೆ ಪಡೆದಿದೆ)
Ph: 0821-2548236 & 2548380. FAX: 0821-2548238 E-mail: jssautonomous@gmail.com Website: JSSCACS.edu.in

ದಿನಾಂಕ: 11.03.2017

## ಪ್ರಕಟಣೆಯ ಕೃಪೆಗಾಗಿ

ಯುಜಿಸಿ ಪ್ರಾಯೋಜಿತ ಜೀವವಿಜ್ಞಾನ ವಿಭಾಗದ ವಿದ್ಯಾರ್ಥಿಗಳಿಗೆ ನೇಮಕಾತಿಪೂರ್ವ ತರಬೇತಿ ಎಂಬ ವಿಷಯದ ಬಗ್ಗೆ ಒಂದು ದಿನದ ರಾಷ್ಟ್ರೀಯ ಕಾರ್ಯಾಗಾರವನ್ನು ದಿನಾಂಕ 11.03.2017ರಂದು ಬಿಎನ್ ರಸ್ತೆಯಲ್ಲಿರುವ ಜೆಎಸ್‌ಎಸ್ ಕಾಲೇಜಿನ ಸ್ನಾತಕೋತ್ತರ ಜೈವಿಕತಂತ್ರಜ್ಞಾನ ಮತ್ತು ಜೀವರಸಾಯನಶಾಸ್ತ್ರ ವಿಭಾಗಗಳಿಂದ ಆಯೋಜಿಸಲಾಗಿತ್ತು.

ಕಾರ್ಯಾಗಾರದ ಉದ್ಘಾಟನೆಯನ್ನು ಡಾ. ಗೌತಮ್ ಬ್ಯಾನರ್ಜಿ, ಸ್ಟ್ರ್ಯಾಟಜಿಕ್ ಸೈನ್ಸ್ ಗ್ರೂಪ್, ಹಿಂದೂಸ್ತಾನ್ ಯುನಿಲಿವರ್ ಲಿ., ರಿಸರ್ಚ್ ಸೆಂಟರ್ ಇವರು ನೆರವೇರಿಸುತ್ತಾ, ವಿದ್ಯಾರ್ಥಿಗಳು ತಾವು ಆಯ್ಕೆ ಮಾಡಿಕೊಂಡ ಹುದ್ದೆಯ ಬಗ್ಗೆ ಆತ್ಮವಿಶ್ವಾಸ ಹೊಂದಿರಬೇಕು ಹಾಗಾದರೆ ಮಾತ್ರ ಅವರು ಹೆಚ್ಚು ನಿಷ್ಠೆಯಿಂದ ಶ್ರದ್ಧೆವಹಿಸಿ ಹುದ್ದೆಯಲ್ಲಿ ತಮ್ಮನ್ನು ತೊಡಗಿಸಿಕೊಳ್ಳಲು ಸಾಧ್ಯವಾಗುತ್ತದೆ ಎಂದು ನುಡಿದರು. ನಂತರದಲ್ಲಿ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿ ನೇಮಕಾತಿಗೆ ಸಂಬಂಧಿಸಿದ ಸಮಸ್ಯೆಗಳ ಬಗ್ಗೆ ಉತ್ತರಿಸಿದರು. ಕಾಲೇಜಿನ ಮುಖ್ಯ ಕಾರ್ಯನಿರ್ವಾಹಕರಾದ ಪ್ರೊ. ಬಿ.ವಿ. ಸಾಂಬಶಿವಯ್ಯ ಸಮಾರಂಭದ ಅಧ್ಯಕ್ಷತೆ ವಹಿಸಿ, ತಮ್ಮ ಅಧ್ಯಕ್ಷೀಯ ಭಾಷಣದಲ್ಲಿ ಈ ನೇಮಕಾತಿ ಪೂರ್ವ ತರಬೇತಿ ಕಾರ್ಯಾಗಾರವು ಸಾರ್ವಜನಿಕ ಹಾಗೂ ಖಾಸಗಿ ಉದ್ಯಮಗಳ ಸಹಯೋಗದಲ್ಲಿ ಆಯೋಜಿಸಲಾಗಿದ್ದು ವಿದ್ಯಾರ್ಥಿಗಳಲ್ಲಿ ಸ್ಫೂರ್ತಿ ಹಾಗೂ ಆತ್ಮವಿಶ್ವಾಸವನ್ನು ಹೆಚ್ಚಿಸಲಿದೆ ಅಲ್ಲದೆ ಈ ತರಬೇತಿಯಿಂದ ವಿದ್ಯಾರ್ಥಿಗಳು ತಮ್ಮ ಕೌಶಲ್ಯವನ್ನು ಸಹ ಹೆಚ್ಚಿಸಿಕೊಳ್ಳಲು ನೆರವಾಗಲಿದೆ ಎಂದು ನುಡಿದರು.

ಈ ಕಾರ್ಯಾಗಾರದಲ್ಲಿ 200ಕ್ಕೂ ಹೆಚ್ಚು ವಿವಿಧ ಕಾಲೇಜಿನ ವಿದ್ಯಾರ್ಥಿಗಳು ಭಾಗವಹಿಸಿದ್ದರು. ಶ್ರೀ. ರೊನಾಲ್ಡ್ ಮ್ಯಾಸೆರೆನ್ಹಸ್, ಮುಖ್ಯಸ್ಥರು, ಮಾನವಸಂಪನ್ಮೂಲ, ಕೆಂವೆಲ್ ಬಯೋಫಾರ್ಮ ಪ್ರೈವೇಟ್ ಲಿ., ಬೆಂಗಳೂರು ಮತ್ತು ಡಾ. ಬಾಲಸುಬ್ರಮಣ್ಯ, ಸಂಯೋಜಕರು, ಬಯೋಟೆಕ್ನಾಲಜಿ ಫಿನಿಷಿಂಗ್ ಸ್ಕೂಲ್, ಕರ್ನಾಟಕ ಬಯೋಟೆಕ್ನಾಲಜಿ ಮತ್ತು ಮಾಹಿತಿ ತಂತ್ರಜ್ಞಾನ ಸೇವೆಗಳು, ಕರ್ನಾಟಕ ಸರ್ಕಾರ, ಬೆಂಗಳೂರು, ಇವರು ವಿದ್ಯಾರ್ಥಿಗಳಿಗೆ ಪೂರ್ವನೇಮಕಾತಿಯ ಬಗ್ಗೆ ತರಬೇತಿ ನೀಡಿದರು.

ಆರಂಭದಲ್ಲಿ ಕಾಲೇಜಿನ ಪ್ರಾಚಾರ್ಯರಾದ ಪ್ರೊ. ಎಂ. ಮಹದೇವಪ್ಪನವರು ಸ್ವಾಗತಿಸಿದರು. ಸ್ನಾತಕೋತ್ತರ ಜೈವಿಕ ತಂತ್ರಜ್ಞಾನ ವಿಭಾಗದ ಮುಖ್ಯಸ್ಥರಾದ ಡಾ. ಬಿ ವೈ ಸತೀಶ್ ಕುಮಾರ್, ವಂದನಾರ್ಪಣೆ ನೆರವೇರಿಸಿದರು. ಸ್ನಾತಕೋತ್ತರ ಜೀವರಸಾಯನಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಡಾ. ಚೇತನ್ ಕುಮಾರ್ ಎಂ, ಉಪಸ್ಥಿತರಿದ್ದರು. ಕು. ನವ್ಯ ಪ್ರಾರ್ಥಿಸಿದರು ಮತ್ತು ಕು. ನಿಶಾ ನಿರೂಪಿಸಿದರು ಎಂದು ಕಾಲೇಜಿನ ಪ್ರಾಚಾರ್ಯರಾದ ಪ್ರೊ. ಎಂ. ಮಹದೇವಪ್ಪ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

(ಪ್ರೊ. ಎಂ. ಮಹದೇವಪ್ಪ)

ಪ್ರಾಂಶುಪಾಲರು
ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು
ಊಟಿ ರಸ್ತೆ, ಮೈಸೂರು-25

ಗೆ
ಸಂಪಾದಕರು
– – – – – – – – – – – – – –
– – – – – – – – – – – – – –
ಮೈಸೂರು